**ಹಾಸನ ನಗರ ಗೃಹ ನಿರ್ಮಾಣ ಸಹಕಾರ ಸಂಘ ನಿ.,**
ದೇವರಾಜ ಅರಸ್ ಮಾರ್ಕೆಟ್, ಹಾಸನ.  264825

| ವಾರ್ಷಿಕ ಬಡ್ಡಿ ದರದ ವಿವರಗಳು | ಸಾಮಾನ್ಯರಿಗೆ % | ಹಿರಿಯ ನಾಗರಿಕರಿಗೆ % |
|---|---|---|
| * 1 ವರ್ಷದಿಂದ 3 ವರ್ಷಗಳವರೆಗೆ | 10.5 | 11 |
| * 181ದಿನಗಳಿಂದ 365 ದಿನಗಳವರೆಗೆ | 8 | 8.5 |
| * 91 ದಿನಗಳಿಂದ 180 ದಿನಗಳವರೆಗೆ | 7 | 7.5 |
| * 31 ದಿನಗಳಿಂದ 90 ದಿನಗಳವರೆಗೆ | 6 | 6.5 |
| * 90 ತಿಂಗಳುಗಳಲ್ಲಿ ಠೇವಣಿ ಮೊತ್ತ ದ್ವಿಗುಣ | | |

-ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ



# ಜನತಾ ಮಾಧ್ಯಮ

ಸಂಪಾದಕ : ಆರ್.ಪಿ.ವೆಂಕಟೇಶಮೂರ್ತಿ  ವ್ಯವಸ್ಥಾಪಕ ಸಂಪಾದಕ :ಎಸ್.ಎನ್.ಮಂಜುನಾಥದತ್ತ



PREMIER MARKETING
#817/A,Opp: Mallige Residency,Govt.High School Field,Road,Hassan.
Ph:9620621333
9448742971
9844090035
08172-233509
Dr.Aquaguard
RO+UV+TDS Controller Water Purifier & Water Softner



ಜನತಾಮಾಧ್ಯಮ ಬೆಳಗಿನ ದೈನಿಕ | JANATHAMADHYAMA | KARKAN. RNI 41566. | ಸಂಪುಟ : 41 | ಸಂಚಿಕೆ :25 | ಶುಕ್ರವಾರ | ಡಿ.1, 2017 | ದೂರವಾಣಿ : 268494 | ಪುಟ-4 | ರೂ.2-00 | NO. HSN-761/ 2015-17


# ಪೌರ ಕಾರ್ಮಿಕರಿಗೆ ಸವಲತ್ತು ಕೊಡಿಸಲು ಸಿದ್ಧ

## ಉಚಿತ ನಿವೇಶನ ಹಕ್ಕು ಪತ್ರ ವಿತರಣೆ, ಯುದ್ಧ ಸ್ಮಾರಕ ಉದ್ಘಾಟನಾ ಸಮಾರಂಭದಲ್ಲಿ ದೇವೇಗೌಡ

ಹಾಸನ : ಪೌರ ಕಾರ್ಮಿಕರಿಗೆ ಸಿಗಬೇಕಾದ ಸವಲತ್ತುಗಳನ್ನು ಕೊಡಿಸಲು ತಾವು ಸಿದ್ಧ ಎಂದು ಮಾಜಿ ಪ್ರಧಾನಿ ಹಾಗೂ ಲೋಕಸಭಾ ಸದಸ್ಯ ಹೆಚ್.ಡಿ. ದೇವೇಗೌಡ ನುಡಿದರು.

ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ನಗರಸಭೆ, ಪೌರ ಸೇವಾ ನೌಕರರ ಸೇವಾ ಸಂಘದ ಸಂಯುಕ್ತಾಶ್ರಯದಲ್ಲಿ ಗುರುವಾರ ನಡೆದ ಪೌರ ಕಾರ್ಮಿಕರ ದಿನಾಚರಣೆ, ಪೌರ ಕಾರ್ಮಿಕರಿಗೆ ಉಚಿತ ನಿವೇಶನ ಹಕ್ಕು ಪತ್ರ ವಿತರಣೆ ಮತ್ತು ಯುದ್ಧ ಸ್ಮಾರಕ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ದೇಶ ರಕ್ಷಣೆಯಲ್ಲಿ ವೀರ ಯೋಧರು ಹಾಗೂ ರಾಷ್ಟ್ರ ಸ್ವಚ್ಛತೆಯಲ್ಲಿ ಪೌರ ಕಾರ್ಮಿಕರ ಕೊಡುಗೆ ಶ್ಲಾಘನೀಯ ಎಂದರು.



ದೇಶಕ್ಕಾಗಿ ಸೇವೆ ಸಲ್ಲಿಸುವ ಸಂದರ್ಭದಲ್ಲಿ ಹುತಾತ್ಮರಾದ ಜಿಲ್ಲೆಯ ಸೈನಿಕರ ಸ್ಮರಣಾರ್ಥವಾಗಿ ನಗರದ ಕುವೆಂಪು ನಗರದ ಜನರಲ್ ಕಾರ್ಯಪ್ಪ ಉದ್ಯಾನವನದಲ್ಲಿ ನಿರ್ಮಿಸಿರುವ ಯುದ್ಧ ಸ್ಮಾರಕದಿಂದ ಯುವ ಜನತೆಯು ದೇಶಸೇವೆ ಮಾಡುವ ಕಾರ್ಯಕ್ಕೆ ಮುಂದಾಗುವಂತಾಗಲಿ ಎಂದು ಆಶಿಸಿದರು.

ಪೌರ ಕಾರ್ಮಿಕರ ದಿನಾಚರಣೆ ಅಂಗವಾಗಿ ಪೌರ ಕಾರ್ಮಿಕರಿಗೆ ಉಚಿತ ನಿವೇಶನದ ಹಕ್ಕು ಪತ್ರ ವಿತರಣೆ ಮಾಡಲಾಗಿದೆ. ಜೊತೆಗೆ ಮನೆ ನಿರ್ಮಿಸಲು ಅನುದಾನ ಕೂಡ ಲಭ್ಯವಿದೆ. ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಶಾಸಕ ಹೆಚ್.ಎಸ್. ಪ್ರಕಾಶ್ ಮಾತನಾಡಿ, ನಗರದ ಸ್ವಚ್ಛತೆಗಾಗಿ ತಮ್ಮ ಆರೋಗ್ಯ ಹದಗೆಡಿಸಿಕೊಂಡು ನೈರ್ಮಲ್ಯ ಕಾಪಾಡುತ್ತಿರುವ ಪೌರ ಕಾರ್ಮಿಕರ ಸೇವೆ ಅಪಾರ ಎಂದರು.

ಶಾಸಕ ಹೆಚ್.ಡಿ.ರೇವಣ್ಣ ಮಾತನಾಡಿ, 38 ಪೌರ ಕಾರ್ಮಿಕರಿಗೆ ಉಚಿತ ನಿವೇಶನದ ಹಕ್ಕು ಪತ್ರ ನೀಡುತ್ತಿರುವುದು ಅಭಿನಂದನಾರ್ಹ. ಸರ್ಕಾರದಿಂದ ದೊರೆಯುವ ಸವಲತ್ತುಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಿ ಎಂದರು.

ಜಿಲ್ಲಾ ಪಂಚಾಯಿತಿ ಅಧ್ಯಕ್ಷೆ ಶ್ವೇತಾ ದೇವರಾಜ್, ನಗರಸಭೆ ಅಧ್ಯಕ್ಷ ಹೆಚ್.ಎಸ್. ಅನಿಲ್ ಕುಮಾರ್, ಉಪಾಧ್ಯಕ್ಷೆ ಲೀಲಾವತಿ ವಾಸು, ಮಲೆನಾಡು ಅಭಿವೃದ್ಧಿ ಮಂಡಳಿ ಅಧ್ಯಕ್ಷ ಹೆಚ್.ಪಿ.ಮೋಹನ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೃಷ್ಣಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠ ರಾಹುಲ್ ಕುಮಾರ್ ಶಹಾಪುರವಾಡ್ ಹಾಗೂ ಹುತಾತ್ಮ ಸೈನಿಕರ ಕುಟುಂಬದ ಸದಸ್ಯರು ಸೇರಿದಂತೆ ಇನ್ನಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



ಅರೆಸೇನಾ ಪಡೆಗಳಲ್ಲಿ ದೇಶಕ್ಕಾಗಿ ಸೇವೆ ಸಲ್ಲಿಸುವ ಸಂದರ್ಭದಲ್ಲಿ ಹುತಾತ್ಮರಾದವರಿಗಾಗಿ ನಗರಸಭೆ ವತಿಯಿಂದ ನಗರದ ಕುವೆಂಪು ನಗರದ ಜನರಲ್ ಕಾರ್ಯಪ್ಪ ಉದ್ಯಾನವನದಲ್ಲಿ ನಿರ್ಮಿಸಿರುವ ವಾರ್ ಮೆಮೋರಿಯಲ್ ಯುದ್ಧ ಸ್ಮಾರಕದ ಉದ್ಘಾಟನೆಯನ್ನು ಗುರುವಾರ ಮಾಜಿ ಪ್ರಧಾನಿ ಹಾಗೂ ಲೋಕಸಭಾ ಸದಸ್ಯ ಹೆಚ್.ಡಿ.ದೇವೇಗೌಡ ನೆರವೇರಿಸಿದರು.

# ಶ್ರವಣಬೆಳಗೊಳ : ಸ್ವಚ್ಛತೆ ಕಾಣದ ಚರಂಡಿಗಳಿಂದ ದುರ್ನಾತ

## ಗಲೀಜು ಸುರಿಯುತ್ತಿರುವ ಮಾರುಕಟ್ಟೆ ಸ್ಥಳಾಂತರಕ್ಕೆ ಮನವಿ

ಶ್ರವಣಬೆಳಗೊಳ : ಸ್ವಚ್ಛ ಭಾರತ ನರೇಂದ್ರ ಮೋದಿಯವರ ಕನಸು. ಸ್ವಚ್ಛ ಭಾರತದ 2ನೇ ಹಂತದ ಮಾದರಿ ಸ್ಥಳಗಳಲ್ಲಿ ದೇಶದ ಒಟ್ಟು 10 ಪ್ರಮುಖ ಸ್ಥಳಗಳು ಆಯ್ಕೆಯಾಗಿದ್ದು , ಅದರಲ್ಲಿ ಕರ್ನಾಟಕದ ನಮ್ಮ ಶ್ರವಣಬೆಳಗೊಳ ಕೂಡ ಒಂದು ಎಂಬುದು ಹೆಮ್ಮೆಯ ಸಂಗತಿಯಾಗಿದೆ.

ವಿಶ್ವ ವಿಖ್ಯಾತಿ ಪಡೆದ ಗೊಮ್ಮಟ ನಗರಿ ಶ್ರವಣಬೆಳಗೊಳದಲ್ಲಿ 12 ವರ್ಷಕೊಮ್ಮೆ ನಡೆಯುವ ಮಹಾಮಸ್ತಕಾಭಿಷೇಕಕ್ಕೆ ದೇಶವಲ್ಲದೇ ವಿದೇಶದಿಂದಲೂ ಪ್ರವಾಸಿಗರು ಬರುತ್ತಾರೆ. 2018ಕ್ಕೆ ನಡೆಯುವ ಮಹಾಮಸ್ತಕಾಭಿಷೇಕಕ್ಕೆ ತಯಾರಿಗಳು ಭರದಿಂದ ನಡೆಯುತ್ತಿವೆ.



ಆದರೆ ಪಾರಂಪರಿಕ ಶ್ರವಣಬೆಳಗೊಳದ ದೊಡ್ಡ ಕಲ್ಯಾಣಿ ಪಕ್ಕದಲ್ಲೇ ಕಸದ ರಾಶಿ ನಿರ್ಮಾಣವಾಗಿದೆ. ಶ್ರವಣಬೆಳಗೊಳದ ಮುಖ್ಯ ರಸ್ತೆಯಲ್ಲೇ ದೃಷ್ಟಿ ಬೊಟ್ಟು ಎಂಬಂತೆ ತರಕಾರಿ ಮಾರುಕಟ್ಟೆ ಇದೆ. ಈ ಮಾರುಕಟ್ಟೆಯು ಪಾದಚಾರಿಗಳು ನಡೆದಾಡುವ ಫುಟ್ ಪಾತ್ ಮತ್ತು ಮುಂಬದಿಯ ಒಳ ಚರಂಡಿ ಮೇಲೆ ನಿರ್ಮಾಣವಾಗಿದೆ. ಇದರಿಂದಾಗಿ ಚರಂಡಿ ಶುಚಿ ಮಾಡಲು ಸಾಧ್ಯವಾಗುತ್ತಿಲ್ಲ.

ಮಾರುಕಟ್ಟೆಯಿಂದಾಗಿ ಪಾದಚಾರಿಗಳು ಈಗ ರಸ್ತೆ ಮಧ್ಯದಲ್ಲೇ ನಡೆದಾಡಬೇಕಾದ ಅನಿವಾರ್ಯತೆ ಇದೆ. ಮಾರುಕಟ್ಟೆಯಲ್ಲಿ ಉತ್ಪತ್ತಿಯಾಗುವ ತ್ಯಾಜ್ಯಗಳನ್ನು ಚರಂಡಿ ಒಳಗೆ ಮತ್ತು ಕಲ್ಯಾಣಿ ಕೋಟೆಯ ಪಕ್ಕದಲ್ಲೇ ಹಾಕಲಾಗುತ್ತಿದೆ. ಇದರಿಂದ ಕೋಟೆಯ ಬಳಿ ದುರ್ನಾತ ಬರಲು ಪ್ರಾರಂಭವಾಗಿದೆ. ಮಳೆ ಬಂದರೆ ಚರಂಡಿಗಳಲ್ಲಿ ನೀರು ಸರಿಯಾದ ರೀತಿಯಲ್ಲಿ ಹೋಗದೆ ರಸ್ತೆ ಮೇಲೇ ಹರಿಯುತ್ತದೆ. ಸಾರ್ವಜನಿಕರಿಗೂ ಬಹಳಷ್ಟು ತೊಂದರೆಗಳಾಗಿವೆ. ಆದರೂ ಗ್ರಾಮ ಪಂಚಾಯಿತಿ ಕಂಡೂ ಕಾಣದಂತೆ ಕಣ್ಮುಚ್ಚಿ ಕುಳಿತಿದೆ.

ಮಹಾಮಸ್ತಕಾಭಿಷೇಕ ಸಮೀಪಿಸುತ್ತಿದೆ. ಇನ್ನಾದರೂ ಮಾರುಕಟ್ಟೆ ಸ್ಥಳಾಂತರಿಸಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಮತ್ತು ಅಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳಬೇಕು ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.

# ಕನ್ನಡ ನುಡಿ ರಕ್ಷಣೆ ಬಗ್ಗೆಯೂ ಕೆಲಸ ಮಾಡುವುದು ಅಗತ್ಯ

## 62ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಸಾಹಿತಿ, ಚಿಂತಕ ಕಾಳೇಗೌಡ ನಾಗಾವರ

ಅರಕಲಗೂಡು : ಕನ್ನಡ ಸಾಹಿತ್ಯ ಮತ್ತು ಕರ್ನಾಟಕದ ಬಹುತ್ವದ ಸವಾಲುಗಳಿಗೆ ಕೊಟ್ಟಂತಹ ಕೊಡುಗೆಯೇ ವಿಶ್ವಮಾನವ ಸಂದೇಶ. ನಾವುಗಳೆಲ್ಲರೂ ಕನ್ನಡ ನಾಡಿನಲ್ಲಿ ಹುಟ್ಟುವುದೇ ಒಂದು ಪುಣ್ಯ ಎಂದು ಹಿರಿಯ ಸಾಹಿತಿ ಹಾಗೂ ಸಂಸ್ಕೃತಿ ಚಿಂತಕ ಪ್ರೊ.ಕಾಳೇಗೌಡ ನಾಗವಾರ ತಿಳಿಸಿದರು.



ತಾಲ್ಲೂಕಿನ ಕೊಣನೂರು ಹೋಬಳಿಯ ಹಂಡ್ರಂಗಿ ಗ್ರಾಮದಲ್ಲಿ ಗುರುವಾರ ನಡೆದ 62ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕನ್ನಡ ನಾಡಿನಲ್ಲಿ ಹುಟ್ಟಿದ ನಾವು ಕನ್ನಡ ಭಾಷೆಯನ್ನು ಮಾತನಾಡುವುದಷ್ಟೇ ಅಲ್ಲ, ಆ ಭಾಷೆಯನ್ನು ಆದರದಿಂದ ಪ್ರೀತಿಸಿ ಎಲ್ಲೆಡೆ ಹರಡುವಂತೆ ಮಾಡುವ ಅಗತ್ಯವಿದೆ. ನಾವೆಲ್ಲರೂ ನಮ್ಮ ದೇಶವನ್ನು ರಕ್ಷಣೆ ಮಾಡುವುದರ ಜೊತೆಗೆ ನಾಡು ನುಡಿ ರಕ್ಷಣೆ ಮಾಡುವುದರ ಬಗ್ಗೆಯೂ ಗಮನ ಹರಿಸಬೇಕಾಗಿದೆ ಎಂದರು.

ಕಾರ್ಯಕ್ರಮಕ್ಕೂ ಮೊದಲು ಜಿಲ್ಲಾ ಉಸ್ತುವಾರಿ ಸಚಿವ ಎ.ಮಂಜು ಅವರು, ನೂತನ ಅಂಬೇಡ್ಕರ್ ಭವನ ಹಾಗೂ ವಿವಿಧ ರಸ್ತೆ, ಚರಂಡಿ ಕಾಮಗಾರಿಗಳಿಗೆ ಉದ್ಘಾಟನೆ ನೆರವೇರಿಸಿದರಲ್ಲದೆ, ವಕ್ಫ್ ಇಲಾಖೆ ವತಿಯಿಂದ ಜಮಾಲ್ ಬೀಬಿ ದರ್ಗಾದಲ್ಲಿ ಅಳವಡಿಸುತ್ತಿರುವ ಟೈಲ್ಸ್ ಹಾಕುವ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿದರು.

62ನೇ ರಾಜ್ಯೋತ್ಸವದ ಪ್ರಯುಕ್ತ ಗ್ರಾ.ಪಂ. ಮುಂಭಾಗದ ವೃತ್ತದಲ್ಲಿ ಗ್ರಾಮ ಪಂಚಾಯಿತಿ, ಹಾಲು ಉತ್ಪಾದಕರ ಸಹಕಾರ ಸಂಘ, ಪ್ರಾಥಮಿಕ ಕೃಷಿ ಪತ್ತಿನ ಸಂಘ, ಸ್ತ್ರೀಶಕ್ತಿ ಸ್ವಸಹಾಯ ಸಂಘಗಳು, ಶಿಕ್ಷಣ ಸಂಸ್ಥೆಗಳು, ಹಾಗೂ ಗ್ರಾಮಸ್ಥರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದ ಧ್ವಜಾರೋಹಣ ನೆರವೇರಿಸಿದ ಸಚಿವ ಮಂಜು ಅವರು, ಧರ್ಮಸ್ಥಳಕ್ಕೆ ಬಿಡಲಾಗುತ್ತಿರುವ ನೂತನ ಬಸ್ ಸಂಚಾರಕ್ಕೆ ಹಸಿರು ನಿಶಾನೆ ತೋರಿ, ನೂತನ ಪಶು ಆಸ್ಪತ್ರೆಯನ್ನು ಉದ್ಘಾಟಿಸಿದರು.

(-4ನೇ ಪುಟಕ್ಕೆ)

# ಡಾಟಾ ಎಂಟ್ರಿ ಆಪರೇಟರ್ ನೇಮಕಾತಿ ರದ್ದತಿಗೆ ಒತ್ತಾಯ

ಹಾಸನ : ಡಾಟಾ ಎಂಟ್ರಿ ಆಪರೇಟರ್ ನೇಮಕಾತಿ ರದ್ದತಿಗೆ ಆಗ್ರಹಿಸಿ ಜಿಲ್ಲಾ ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ಗುರುವಾರ ಜಿಲ್ಲಾ ಪಂಚಾಯತ್ ಕಛೇರಿ ಮುಂದೆ ಪ್ರತಿಭಟನೆ ನಡೆಸಲಾಯಿತು.



ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ವತಿಯಿಂದ ರಾಜ್ಯದ ಎಲ್ಲಾ ಗ್ರಾಮ ಪಂಚಾಯ್ತಿಗಳಿಗೆ ಹೊಸದಾಗಿ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ನೇಮಕ ಮಾಡಲಾಗುತ್ತಿದ್ದು , ಈ ನೇಮಕಾತಿ ಆದೇಶವನ್ನು ರದ್ದುಗೊಳಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯದಲ್ಲಿ ಸುಮಾರು 6020 ಗ್ರಾಮ ಪಂಚಾಯಿತಿಗಳಿಗೆ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ನೇಮಕ ಮಾಡಲು ಸರ್ಕಾರ ಆದೇಶಿಸಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಹೊರಡಿಸಲಾಗಿರುವ ಆದೇಶದಂತೆ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ಪಿ.ಯು.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಎಂದು ತಿಳಿಸಲಾಗಿದೆ. ಈ ನೇಮಕಾತಿ ಸಂಪೂರ್ಣವಾಗಿ ಮೆರಿಟ್ ಆಧಾರದ ಮೇಲೆ ನಡೆಯಬೇಕೆಂದು ಈಗಾಗಲೇ ಸರ್ಕಾರ ಆದೇಶ ನೀಡಿದೆ. ಇದರಿಂದ ಮೀಸಲಾತಿ ಆಧಾರದ ಮೇಲೆ ನೇಮಕ ಆಗುವುದಿಲ್ಲ. ಇದರಿಂದ ಬಹಳಷ್ಟು ನಿರುದ್ಯೋಗಿಗಳಿಗೆ ಅನಾನುಕೂಲವಾಗಲಿದೆ ಎಂದು ದೂರಿದರು.

ಡಾಟಾ ಎಂಟ್ರಿ ಆಪರೇಟರ್‌ಗಳನ್ನು ಮೆರಿಟ್ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವುದರಿಂದ ಎಸ್.ಸಿ., ಓಬಿಸಿ, ಗ್ರಾಮೀಣ ಅಭ್ಯರ್ಥಿ, ಅಂಗವಿಕಲ ಅಭ್ಯರ್ಥಿ ಮತ್ತು ಮೀಸಲಾತಿಯಡಿಯಲ್ಲಿ ಉದ್ಯೋಗ ಬಯಸುವ ಎಲ್ಲಾ ವರ್ಗದ ಜನರಿಗೆ ತೊಂದರೆ ಆಗಲಿದೆ. ಇಂತಹ ಆದೇಶದ ಮೂಲಕ ಸರಕಾರ ಮೀಸಲಾತಿ ವಿರೋಧಿ ಎಂಬುದನ್ನು ತೋರ್ಪಡಿಸಿದೆ. ಈ ಮೀಸಲಾತಿ ವಿರೋಧಿ ಸರಕಾರದ ಆದೇಶವನ್ನು ದಲಿತ ಸಂಘಟನೆಗಳ ಒಕ್ಕೂಟ ವಿರೋಧಿಸುತ್ತದೆ ಎಂದರು.

ಪ್ರತಿಭಟನೆಯಲ್ಲಿ ಜಿಲ್ಲಾ ದಲಿತ ಸಂಘಟನೆಗಳ ಒಕ್ಕೂಟದ ಕೆ.ಈರಪ್ಪ , ಹೆಚ್.ಕೆ.ಸಂದೇಶ್, ಕೃಷ್ಣದಾಸ್, ನಾಗರಾಜ್ ಹೆತ್ತೂರ್, ಕೆ.ಪ್ರಕಾಶ್, ಕ್ರಾಂತಿ ಪ್ರಸಾದ್ ತ್ಯಾಗಿ, ಕೆಲವತ್ತಿ ಚಂದ್ರು, ಜಿ.ಓ.ಮಹಾಂತಪ್ಪ , ಕುಮಾರಯ್ಯ ಇನ್ನಿತರರು ಪಾಲ್ಗೊಂಡಿದ್ದರು.

# ಇಂದು ನಗರದಲ್ಲಿ ವಿಶ್ವ ಏಡ್ಸ್ ದಿನಾಚರಣೆ

ಹಾಸನ: 'ನನ್ನ ಆರೋಗ್ಯ ನನ್ನ ಹಕ್ಕು' ಎಂಬ ಘೋಷವಾಕ್ಯದೊಂದಿಗೆ ಶುಕ್ರವಾರ ವಿಶ್ವ ಏಡ್ಸ್ ದಿನಾಚರಣೆಯನ್ನು ನಗರದ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ವೆಂಕಟೇಶ್ ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಅವರು, ವಿಶ್ವ ಆರೋಗ್ಯ ದಿನಾಚರಣೆ ಅಂಗವಾಗಿ ಶುಕ್ರವಾರ ನಗರದಾದ್ಯಂತ ಬೃಹತ್ ಜಾಥಾವನ್ನು ಹಮ್ಮಿಕೊಳ್ಳುವ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲಾಗುವುದು ಎಂದರು.

# ಅರಸೀಕೆರೆಯಲ್ಲಿ ಜಲ ಸಂರಕ್ಷಣೆ ಕಾರ್ಯಾಗಾರ

ಹಾಸನ :ಗಣಿ ಮತ್ತು ಭೂಗರ್ಭ ಶಾಸ್ತ್ರ ಇಲಾಖೆ ವತಿಯಿಂದ ಅರಸೀಕೆರೆಯಲ್ಲಿ ಡಿ.8ರಂದು ಜಲ ಸಂರಕ್ಷಣೆ ಕುರಿತಂತೆ ಒಂದು ದಿನದ ಕಾರ್ಯಾಗಾರ ನಡೆಯಲಿದೆ.

ಅರಸೀಕೆರೆ ಹಾಗೂ ಚನ್ನರಾಯಪಟ್ಟಣ ತಾಲ್ಲೂಕಿನ ತಾಲ್ಲೂಕು ಮಟ್ಟದ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಪಿ.ಡಿ.ಓ.ಗಳು ಹಾಗೂ ಪರಿಸರ ಸಂರಕ್ಷಣೆಯಲ್ಲಿ ತೊಡಗಿರುವ ಸ್ವಯಂ ಸೇವಕರು ಈ ಕಾರ್ಯಾಗಾರದಲ್ಲಿ ಪಾಲ್ಗೊಳ್ಳಲಿದ್ದಾರೆ.

ವಿಷಯ ತಜ್ಞರಾದ ಮಂಡ್ಯದ ಪಿ.ಇ.ಎಸ್. ಕಾಲೇಜಿನ ಡಾ||ಪ್ರಸನ್ನ ಕುಮಾರ್, ಮೈಸೂರು ಆಡಳಿತ ತರಬೇತಿ ಸಂಸ್ಥೆಯ ಡಾ||ರಮೇಶ್, ಕಂದಲಿ ಕೃಷಿ ವಿಜ್ಞಾನ ಕೇಂದ್ರದ ಡಾ||ಟಿ.ಚನ್ನಕೇಶವ ಅವರು ಉಪನ್ಯಾಸ ನೀಡಲಿದ್ದಾರೆ ಎಂದು ಹಿರಿಯ ಭೂ ವಿಜ್ಞಾನಿ ಸುಧಾ ಅವರು ಪತ್ರಿಕೆಗೆ ತಿಳಿಸಿದ್ದಾರೆ.

# ರಸ್ತೆ ಅಭಿವೃದ್ಧಿ : ಅನುದಾನಕ್ಕೆ ಶಾಸಕ ಆಗ್ರಹ



ಹೆತ್ತೂರು : ಪಶ್ಚಿಮ ಘಟ್ಟದ ರಸ್ತೆಗಳ ಸಮಗ್ರ ಅಭಿವೃದ್ಧಿಗೆ ಸರ್ಕಾರ ಹೆಚ್ಚಿನ ಅನುದಾನ ಬಿಡುಗಡೆ ಮಾಡಬೇಕು ಎಂದು ಶಾಸಕ ಎಚ್.ಕೆ.ಕುಮಾರಸ್ವಾಮಿ ಒತ್ತಾಯಿಸಿದರು.

ಹೆತ್ತೂರು ಹೋಬಳಿ ಬಾಚಿಹಳ್ಳಿ ಗ್ರಾಮ ಸಮೀಪದ ಅತ್ತಿಹಳ್ಳಿ ರಸ್ತೆ ಕಾಮಗಾರಿಗೆ ಗುರುವಾರ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಈ ರಸ್ತೆಗೆ 1 ಕೋಟಿ 75 ಲಕ್ಷ ರೂ. ಅನುದಾನ ಬಿಡುಗಡೆ ಮಾಡಲಾಗಿದೆ. ಮೂರು ತಿಂಗಳ ಒಳಗೆ ಕಾಮಗಾರಿ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಸೂಚಿಸಲಾಗಿದೆ ಎಂದರು.

ಹೋಬಳಿಯ ಕುಂಬ್ರಹಳ್ಳಿ,ಕಾಗಿನಹರೆ ಸೇರಿದಂತೆ ಕೆಲವು ರಸ್ತೆ ಕಾಮಗಾರಿಗಳನ್ನು ಶೀಘ್ರದಲ್ಲೇ ಪ್ರಾರಂಭಿಸಲಾಗುವುದು. ಅಲ್ಲದೆ ಕಿರ್ಕಳ್ಳಿ ರಸ್ತೆ ಅಭಿವೃದ್ಧಿಗೆ 1.7 ಕೋಟಿ ರೂ. ಅನುದಾನ ಬಿಡುಗಡೆ ಮಾಡಲಾಗಿದ್ದು, ಕಾಮಗಾರಿ ಪ್ರಾರಂಭವಾಗಿದೆ ಎಂದರು.

ತಾಲ್ಲೂಕಿನ ವಿವಿಧ ರಸ್ತೆಗಳನ್ನು ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಶಾಸಕರು ತಿಳಿಸಿದರು.

ಜಿ.ಪಂ. ಸದಸ್ಯೆ ಉಜ್ಮ ರಿಜ್ವಿ . ಎಪಿಎಂಸಿ ನಿರ್ದೇಶಕ ಧ್ರುವಕುಮಾರ್, ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ಅನಿತ ಕುಮಾರಸ್ವಾಮಿ, ಸದಸ್ಯರಾದ ಎ.ಎನ್.ಜಯರಾಜ್, ರಮೇಶ್, ಕೃಷ್ಣಪ್ಪ ಇನ್ನಿತರರು ಈ ಸಂದರ್ಭದಲ್ಲಿ ಇದ್ದರು.

# ಎಸ್.ಎಂ.ಕೆ. ಬಡಾವಣೆ : ಪಟ್ಟಭದ್ರರಿಂದ ಅಪಪ್ರಚಾರ

ಹಾಸನ: ಎಸ್.ಎಂ.ಕೆ. ಬಡಾವಣೆ ನಿವೇಶನ ಹಂಚಿಕೆಯಲ್ಲಿ ಪಾರದರ್ಶಕವಾಗಿ ನಡೆದುಕೊಳ್ಳಲಾಗಿದೆ. ಆದರೆ ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಚಿತಾವಣೆ ನಡೆಸಿ ಕೆಟ್ಟ ಹೆಸರು ತರಲು ಪ್ರಯತ್ನ ನಡೆಸಿವೆ ಎಂದು ಪ್ರಾಧಿಕಾರದ ಅಧ್ಯಕ್ಷ ಹೆಚ್.ಆರ್.ಕೃಷ್ಣಕುಮಾರ್ ತಿಳಿಸಿದರು.



ಕಾನೂನು ಅರಿವು ಇಲ್ಲದವರಿಂದಲೇ ಇಂತಹ ಕೆಲಸವಾಗಿದೆ. ನ್ಯಾಯಾಲಯದ ಆದೇಶ ಹಾಗೂ ಸರ್ಕಾರದ ಅನುಮತಿಯನ್ನು ಪಡೆದು ವಸತಿ ಬಡಾವಣೆಯಲ್ಲಿ ನಿವೇಶನ ರಚಿಸಿ 6335 ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ಎಂದು ಗುರುವಾರ ತಮ್ಮ ಕಛೇರಿಯಲ್ಲಿ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಉಚ್ಚ ನ್ಯಾಯಾಲಯದ ಆದೇಶದಂತೆ ಹಾಗೂ ಸರ್ಕಾರದ ಅಧಿಸೂಚನೆಯಂತೆಯೇ ನಗರದ ಹೊರವಲಯದಲ್ಲಿರುವ ಎಸ್.ಎಂ.ಕೆ. ಬಡಾವಣೆಯ ನಿವೇಶನಗಳ ಹಂಚಿಕೆ ನಡೆದಿದೆ. ಯಾವುದೇ ರೀತಿಯ ಭ್ರಷ್ಟಾಚಾರ ಹಾಗೂ ಅವ್ಯವಹಾರ ನಡೆದಿಲ್ಲ. 12 ಸಾವಿರ ರೂ.ಒಳಗೆ ಆದಾಯ ಇರುವವರಿಗೆ ನಿವೇಶನ ಕೊಡುವ ಮೂಲಕ ಎಲ್ಲಾ ಪ್ರಾಮಾಣಿಕ ಪ್ರಯತ್ನ ಮಾಡಲಾಗಿದೆ. ಆದರೆ ಉತ್ತಮ ಕೆಲಸಕ್ಕೆ ಮಸಿ ಬಳಿಯುವ ನಿಟ್ಟಿನಲ್ಲಿ ಅಪಪ್ರಚಾರ ಮಾಡಲಾಗಿದೆ ಎಂದರು.

ಬಡಾವಣೆಗೆ ಭೂಮಿ ನೀಡಿದ ರೈತರು ನ್ಯಾಯಾಲಯದ ಮೊರೆ ಹೋಗಿದ್ದರಿಂದ ಕಳೆದ 20 ವರ್ಷಗಳಿಂದ ನಿವೇಶನ ಹಂಚಿಕೆ ಮಾಡಲು ಸಾಧ್ಯವಾಗಿರಲಿಲ್ಲ. ಮುಖ್ಯಮಂತ್ರಿ, ಜಿಲ್ಲಾ ಉಸ್ತುವಾರಿ ಸಚಿವರುಗಳಾರೂ ರೈತರ ಮನವೊಲಿಸಿ ನಿವೇಶನ ಹರಾಜು ಮಾಡಿಲ್ಲ ಎಂದರು.

ನಾನು ಹುಡಾ ಅಧ್ಯಕ್ಷನಾದ ಕೆಲವೇ ತಿಂಗಳಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎ.ಮಂಜು ಅವರ ಮಾರ್ಗದರ್ಶನದಲ್ಲಿ ಎಸ್.ಎಂ.ಕೆ. ನಗರದ ವಸತಿ ಬಡಾವಣೆಯನ್ನು 453 ಎಕರೆ ಪ್ರದೇಶದಲ್ಲಿ ಅಭಿವೃದ್ಧಿಪಡಿಸಿ ವಿವಿಧ ಅಳತೆಯ 6335 ನಿವೇಶನಗಳನ್ನು ರಚಿಸಲಾಗಿದೆ. ಉಚ್ಚ ನ್ಯಾಯಾಲಯದ ಆದೇಶ ಹಾಗೂ ಸರ್ಕಾರದ ಅನುಮೋದನೆಯಂತೆ ವಸತಿ ಯೋಜನೆಯನ್ನು ಶೇ.60:40ರ ಅನುಪಾತದಲ್ಲಿ ರೈತರ ಸಹಭಾಗಿತ್ವದೊಂದಿಗೆ ಅನುಷ್ಠಾನಗೊಳಿಸಲಾಗಿದೆ ಎಂದು ಹೇಳಿದರು.

ಯಾರಾದರೂ ನಿವೇಶನ ಕೊಡಿಸುವುದಾಗಿ ನಂಬಿಕೆ ಹುಟ್ಟಿಸಿದರೆ ಅದಕ್ಕೆ ಕಿವಿಗೊಡದೆ ನಮಗೆ ತಕ್ಷಣ ತಿಳಿಸಬೇಕು ಎಂದರು.

ಈ ವೇಳೆ ಹುಡಾ ನಿರ್ದೇಶಕ ಶಂಕರರಾಜು ಇದ್ದರು.